## ನಾಡ ಕಚೇರಿಗಳನ್ನು ಪ್ರಾರಂಭಿಸುವುದು

**2103 (1099); ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)**

ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ತಂಬ್ರಹಳ್ಳಿ, ಮುರಿಯಮ್ಮನಹಳ್ಳಿ, ಕೊಟ್ಟೂರು ಮತ್ತು ಕೊಗಳಿ ಹೋಬಳಿಯ ನಾಡ ಕಛೇರಿಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ 4 ಹೋಬಳಿ ನಾಡ ಕಛೇರಿಗಳನ್ನು ಹೊಸದಾಗಿ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಹೊಸ ನಾಡಕಛೇರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು? (ಮಾಹಿತಿ ನೀಡುವುದು)

**ಶ್ರೀ ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು)**

ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಗರಿಬೊಮ್ಮನಹಳ್ಳಿ, ಮರಿಯಮ್ಮನಹಳ್ಳಿ, ಕೊಟ್ಟೂರು, ತಂಬ್ರಹಳ್ಳಿ, ಮತ್ತು ಕೊಗಳಿ ನಾಡಕಛೇರಿಗಳು ಕಾರ್ಯನಿರ್ವಹಿಸುತ್ತಿದ್ದು, ಮರಿಯಮ್ಮನಹಳ್ಳಿ, ಕೊಟ್ಟೂರು, ಮತ್ತು ಕೊಗಳಿ ನಾಡಕಛೇರಿಗಳು ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ. ಆದರೆ ತಂಬ್ರಹಳ್ಳಿ ನಾಡಕಛೇರಿಯು ಹಳೆ ಚಾವಡಿ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಕಟ್ಟಡಲು ಶಿಥಿಲಾವಸ್ಥೆಯಲ್ಲಿರುವ ಬಗ್ಗೆ ಜಿಲ್ಲಾಧಿಕಾರಿಗಳಿಂದ ವರದಿಯನ್ನು ಪಡೆದು ಕಟ್ಟಡ ದುರಸ್ತಿಗೆ ಕ್ರಮವಹಿಸಲಾಗುಗುವುದು.

ಆ) & (ಇ) ಜಿಲ್ಲಾಧಿಕಾರಿಗಳಿಂದ ಹೊಸ ನಾಡಕಛೇರಿಗಳ ಸ್ಥಾಪನೆಗೆ ಪ್ರಸ್ತಾಪನೆ ಸ್ವೀಕೃತವಾದಲ್ಲಿ, ನಿಯಮಾನುಸಾರ ಪರಿಶೀಲಿಸಲಾಗುವುದು.